## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ನಿವೃತ್ತಿ ವೇತನ ಸೌಲಭ್ಯಗಳ ಪರಿಷ್ಕರಣೆ – ಮಾರ್ಪಾಡು

ಓದಲಾಗಿದೆ:
1. ಸರ್ಕಾರಿ ಆದೇಶ ಸಂಖ್ಯೆ: ಆಇ (ವಿ) 3 ಪಿಇಎನ್ 2007(1) ದಿನಾಂಕ: 06–06–2007.
2. ಸರ್ಕಾರಿ ಆದೇಶ ಸಂಖ್ಯೆ: ಇಡಿ 37 ಯುಎನ್ಇ 2009 ದಿನಾಂಕ 24–12–2009.
3. ಸರ್ಕಾರಿ ಆದೇಶ ಸಂಖ್ಯೆ: ಎಹೆಚ್‌ಡಿ 64 ಎಯುಎಂ 2009 ದಿನಾಂಕ 24–03–2010
4. ಸರ್ಕಾರಿ ಆದೇಶ ಸಂಖ್ಯೆ: ಎಹೆಚ್‌ಎಫ್ 106 ವಿಇಟಿ 2009 ದಿನಾಂಕ 24–05–2010
5. ಸರ್ಕಾರಿ ಆದೇಶ ಸಂಖ್ಯೆ: ಲಾ 147 ಎಲ್‌ಎಸಿ 2009 ದಿನಾಂಕ 24–06–2010.

---

ಪ್ರಸ್ತಾವನೆ:

ಮೇಲೆ (1) ರಲ್ಲಿ ಓದಲಾದ ದಿನಾಂಕ 6–6–2007ರ ಸರ್ಕಾರಿ ಆದೇಶದಲ್ಲಿ ಐದನೇ ರಾಜ್ಯ ವೇತನ ಆಯೋಗದ ಶಿಫಾರಸ್ಸುಗಳಂತೆ ದಿನಾಂಕ 1–7–2005 ರಂದು ಅಥವಾ ಆನಂತರದ ನಿವೃತ್ತಿಯಿಂದ ಅಥವಾ ಸೇವಾವಧಿಯಲ್ಲಿರುವಾಗಲೇ ಮರಣ ಹೊಂದುವ ಸರ್ಕಾರಿ ನೌಕರರುಗಳ ನಿವೃತ್ತಿ/ಕುಟುಂಬ ನಿವೃತ್ತಿ ವೇತನ ಸೌಲಭ್ಯಗಳನ್ನು ಪರಿಷ್ಕರಿಸಲಾಗಿದ್ದು, ಸದರಿ ಆದೇಶದ ಕಂಡಿಕೆ 12 ರಲ್ಲಿ ಈ ಆದೇಶವು ಯುಜಿಸಿ/ಎಐಸಿಟಿಇ/ಐಸಿಎಆರ್ ಮತ್ತು ಎಫ್‌ಎನ್‌ಜೆಪಿಸಿ ವೇತನ ಶ್ರೇಣಿಗಳಲ್ಲಿರುವ ಅಧಿಕಾರಿಗಳಿಗೆ ಅನ್ವಯಿಸುವುದಿಲ್ಲವೆಂದು ಆದೇಶಿಸಲಾಗಿರುತ್ತದೆ.

ಮೇಲೆ (2) ರಲ್ಲಿ ಓದಲಾದ ದಿನಾಂಕ 24–12–2009ರ ಸರ್ಕಾರಿ ಆದೇಶದಲ್ಲಿ ಯುಜಿಸಿ ವೇತನ ಶ್ರೇಣಿಯಲ್ಲಿರುವ ಬೋಧಕರಿಗೆ ಮತ್ತು ಸಮಾನ ವರ್ಗದವರಿಗೆ 2006ರ ಪರಿಷ್ಕೃತ ಯುಜಿಸಿ ವೇತನ ಶ್ರೇಣಿಗಳನ್ನು ವಿಸ್ತರಿಸಲಾಗಿದೆ.

ಮೇಲೆ (3) ಮತ್ತು (4) ರಲ್ಲಿ ಕ್ರಮವಾಗಿ ಓದಲಾದ ದಿನಾಂಕ 24–03–2010 ಮತ್ತು 24–05–2010ರ ಸರ್ಕಾರಿ ಆದೇಶಗಳಲ್ಲಿ ಐಸಿಎಆರ್ ವೇತನ ಶ್ರೇಣಿಯಲ್ಲಿರುವ ಬೋಧಕರಿಗೆ ಮತ್ತು ಸಮಾನ ವರ್ಗದವರಿಗೆ 2006ರ ಪರಿಷ್ಕೃತ ಐಸಿಎಆರ್ ವೇತನ ಶ್ರೇಣಿಗಳನ್ನು ವಿಸ್ತರಿಸಲಾಗಿದೆ.

ಮೇಲೆ (5) ರಲ್ಲಿ ಓದಲಾದ ದಿನಾಂಕ 24–06–2010 ರ ಸರ್ಕಾರಿ ಆದೇಶದಲ್ಲಿ ನ್ಯಾಯಾಧೀಶ ಪದ್ಮನಾಭನ್ ಆಯೋಗದ ಶಿಫಾರಸ್ಸುಗಳಂತೆ ಎಫ್‌ಎನ್‌ಜೆಪಿಸಿ ವೇತನ ಶ್ರೇಣಿಯಲ್ಲಿರುವ ನ್ಯಾಯಾಂಗ ಅಧಿಕಾರಿಗಳ ವೇತನ ಶ್ರೇಣಿಗಳನ್ನು ಪರಿಷ್ಕರಿಸಲು ಮಂಜೂರಾತಿ ನೀಡಲಾಗಿದೆ.

ಮೇಲಿನಂತೆ ವೇತನ ಶ್ರೇಣಿಗಳನ್ನು ಪರಿಷ್ಕರಿಸಿರುವ ಹಿನ್ನೆಲೆಯಲ್ಲಿ ಮತ್ತು ಅವರುಗಳಿಗೆ ನಿವೃತ್ತಿ ವೇತನ ಸೌಲಭ್ಯಗಳು ರಾಜ್ಯ ಸರ್ಕಾರಿ ನೌಕರರುಗಳಿಗೆ ಲಭ್ಯವಿರುವಂತೆ ಅನ್ವಯವಾಗುತ್ತದೆ ಎಂದು ಆದೇಶಿಸಿರುವುದರಿಂದ ಈ ವೇತನ ಶ್ರೇಣಿಗಳಲ್ಲಿ ವೇತನ

ಪಡೆಯುತ್ತಿರುವ ನೌಕರರಿಗೆ ದಿನಾಂಕ 6-6-2007ರ ಸರ್ಕಾರಿ ಆದೇಶದಲ್ಲಿ ಉದ್ದೇಶಿಸಿರುವ ಪರಿಷ್ಕೃತ ನಿವೃತ್ತಿ ವೇತನ ಸೌಲಭ್ಯಗಳನ್ನು ವಿಸ್ತರಿಸುವುದನ್ನು ಸರ್ಕಾರವು ಪರಿಶೀಲಿಸಿದೆ ಮತ್ತು ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ: ಆಇ(ವಿಶೇಷ) 149 ಪಿಇಎನ್ 2010,**
**ಬೆಂಗಳೂರು, ದಿನಾಂಕ:19ನೇ ಆಗಸ್ಟ್ 2010**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ ಸರ್ಕಾರಿ ಆದೇಶ ಸಂಖ್ಯೆ: ಎಫ್‌ಡಿ (ವಿ) 3 ಪಿಇಎನ್ 2007(1) ದಿನಾಂಕ 6-6-2007ರಲ್ಲಿ ಪರಿಷ್ಕರಿಸಿದ ನಿವೃತ್ತಿ ವೇತನ ಸೌಲಭ್ಯಗಳನ್ನು ಯುಜಿಸಿ/ಐಸಿಎಆರ್/ಎಐಸಿಟಿಇ ಮತ್ತು ಎಫ್‌ಎನ್‌ಜೆಪಿಸಿ ವೇತನ ಶ್ರೇಣಿಗಳಲ್ಲಿರುವ ಅಧಿಕಾರಿಗಳಿಗೆ ಅನ್ವಯಿಸಲು ಆದೇಶಿಸಲಾಗಿದೆ.

ಈ ಆದೇಶದಲ್ಲಿನ ಇತರೆ ಎಲ್ಲಾ ಷರತ್ತುಗಳು ಯಾವ ಬದಲಾವಣೆ ಇಲ್ಲದೆ ಅನ್ವಯವಾಗುತ್ತದೆ.

ಕರ್ನಾಟಕ ರಾಜ್ಯಪಾಲರ ಆದೇಶದ ಮೇರೆಗೆ
ಮತ್ತು ಅವರ ಹೆಸರಿನಲ್ಲಿ,

(ಸುಂದರ ರಾಜ ಗುಪ್ತ)
ಸರ್ಕಾರದ ಉಪ ಕಾರ್ಯದರ್ಶಿ,
ಆರ್ಥಿಕ ಇಲಾಖೆ (ಸೇವೆಗಳು-2).

ಗೆ:

1. ಪ್ರಧಾನ ಮಹಾಲೇಖಪಾಲರು (ಸಿವಿಲ್ ಮತ್ತು ವಾಣಿಜ್ಯ ಲೆಕ್ಕಪರಿಶೋಧನೆ), ಕರ್ನಾಟಕ, ಬೆಂಗಳೂರು,
2. ಮಹಾಲೇಖಪಾಲರು (ಕಂದಾಯ ಮತ್ತು ಕಾಮಗಾರಿಗಳು ಮತ್ತು ಅರಣ್ಯ ಲೆಕ್ಕ ಪರಿಶೋಧನೆ), ಕರ್ನಾಟಕ, ಬೆಂಗಳೂರು,
3. ಮಹಾಲೇಖಪಾಲರು (ಲೆಕ್ಕಗಳು ಮತ್ತು ಹಕ್ಕುಗಳು), ಕರ್ನಾಟಕ, ಬೆಂಗಳೂರು,
4. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು,
5. ಸರ್ಕಾರದ ಅಪರ/ಜಂಟಿ/ಉಪ/ಅಧೀನ ಕಾರ್ಯದರ್ಶಿಗಳು, ಶಿಕ್ಷಣ ಇಲಾಖೆ/ಕೃಷಿ ಮತ್ತು ತೋಟಗಾರಿಕೆ ಇಲಾಖೆ/ಕಾನೂನು ಇಲಾಖೆ,
6. ಸರ್ಕಾರದ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಷ್ಣ)/ (ಆಯವ್ಯಯ ಮತ್ತು ಸಂಪನ್ಮೂಲ)
7. ಸರ್ಕಾರದ ಉಪ ಕಾರ್ಯದರ್ಶಿ/ಅಧೀನ ಕಾರ್ಯದರ್ಶಿ, ಶಿಕ್ಷಣ ಇಲಾಖೆ,
8. ನಿರ್ದೇಶಕರು, ರಾಜ್ಯ ಖಜಾನೆ ಇಲಾಖೆ, ಬೆಂಗಳೂರು,
9. ಎಲ್ಲಾ ಜಿಲ್ಲಾ ಖಜಾನಾಧಿಕಾರಿಗಳು,
10. ಶಾಖಾ ರಕ್ಷಕ ಕಡತ/ವಾರದ ರಾಜ್ಯಪತ್ರ.